## ದಿನಾಂಕ 03-12-2010ರಂದು ಮ.12.05 ಗಂಟೆಗೆ ಹಾಸನ ಜಿಲ್ಲಾ ಪಂಚಾಯತ್ ಹೊಯ್ಸಳ ಸಭಾಂಗಣದಲ್ಲಿ ನಡೆದ ಜಿಲ್ಲಾ ಪಂಚಾಯತ್ ವಿಶೇಷ ಸಭೆಯ ನಡವಳಿಕೆಗಳು.

**ಅಧ್ಯಕ್ಷತೆ: ಶ್ರೀಮತಿ ಮಹದೇವಮ್ಮ**

**ಅಧ್ಯಕ್ಷರು,**

**ಜಿಲ್ಲಾ ಪಂಚಾಯತ್, ಹಾಸನ.**

ರಿ: 40 ಗೈರುಹಾಜರಿ: 18

| ವಿಷಯ | ಚರ್ಚೆ | ತೀರ್ಮಾನ |
|---|---|---|
| | ಉಪಕಾರ್ಯದರ್ಶಿ(ಅಭಿವೃದ್ಧಿ)ರವರು ಸಭೆಗೆ ಮಾನ್ಯ ಅಧ್ಯಕ್ಷರು, ಮಾನ್ಯ ಉಪಾಧ್ಯಕ್ಷರು, ಮಾನ್ಯ ವಿಧಾನಸಭಾ ಸದಸ್ಯರು, ಮಾನ್ಯ ಜಿಲ್ಲಾ ಪಂಚಾಯತಿ ಸದಸ್ಯರು, ಮಾನ್ಯ ತಾಲ್ಲೂಕು ಪಂಚಾಯತಿ ಅಧ್ಯಕ್ಷರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು, ಪತ್ರಿಕಾ ಮಾಧ್ಯಮದವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆ ವಹಿಸಿ ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಧ್ಯಕ್ಷರನ್ನು ಕೋರಿದರು. | |
| ಜಿಲ್ಲೆಯಲ್ಲಿ 12 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮಂಜೂರಾಗಿ ರದ್ದಾಗಿರುವ ಬಗ್ಗೆ ಮತ್ತು ಗ್ರಾಮೀಣ ಕುಡಿಯುವ ನೀರಿನ ಸಮಸ್ಯೆ ಹಾಗೂ ಜಿಲ್ಲೆ ಯಲ್ಲಿ ಅತಿವೃಷ್ಟಿ ಯಿಂದ ರಸ್ತೆ, ಕೆರೆ ಹಾಗೂ ಮನೆಗಳು ಹಾನಿಗೊಳಗಾಗಿರುವ ಬಗ್ಗೆ. | ಮಾನ್ಯ ಜಿಲ್ಲಾ ಪಂಚಾಯತ್ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಇಲಾಖಾಧಿಕಾರಿಗಳು ಜಿಲ್ಲೆಯ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಕಾರ್ಯಕ್ರಮಗಳಿಗೆ ಹಾಜರಾಗುತ್ತಿಲ್ಲ. ಚನ್ನರಾಯಪಟ್ಟಣ ತಾಲ್ಲೂಕಿನ ಕಲ್ಕೆರೆಯಲ್ಲಿ ನಡೆದ ವಿದ್ಯಾರ್ಥಿನಿಲಯದ ಉದ್ಘಾಟನೆಗೆ ಜಿಲ್ಲಾ ಉಸ್ತುವಾರಿ ಮಂತ್ರಿಗಳು ಬರುವವರೆಗೆ ಕಾಯುತ್ತಿದ್ದುದರಿಂದ, ಮಕ್ಕಳು ಹೊರಗೆ ಇರಬೇಕಾದ ಪರಿಸ್ಥಿತಿ ಉಂಟಾಗಿರುತ್ತದೆ. ಆದ್ದರಿಂದ, ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಅಧಿಕಾರಿಗಳು ಸಂಬಂಧಿಸಿದ ಕಾರ್ಯಕ್ರಮಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ಕಾರ್ಯಕ್ರಮಗಳಿಗೆ ಹಾಜರಾಗದೇ ಇದ್ದರೆ ಅವರ ಮೇಲೆ ಶಿಸ್ತು ಕ್ರಮವನ್ನು ತೆಗೆದುಕೊಳ್ಳಬೇಕು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಚನ್ನರಾಯಪಟ್ಟಣ ಹಾಗೂ ಜಿಲ್ಲಾ ಅಧಿಕಾರಿಗಳು, ಬಿ.ಸಿ.ಎಂ. ಇಲಾಖೆ ಇವರು ಕಾರ್ಯಕ್ರಮಕ್ಕೆ ಹಾಜರಾಗಿರುವುದಿಲ್ಲ. ಜಿಲ್ಲಾ ಉಸ್ತುವಾರಿ ಸಚಿವರು ಬರಲಿ ಎಂದು ಕಾಯ್ದರೆ ಅಭಿವೃದ್ಧಿ ಮಾಡುವುದು ಹೇಗೆ ಎಂದು ಕೇಳಿದರು.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎಸ್.ಪ್ರಕಾಶ್‌ರವರು ಮಾತನಾಡಿ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಸಭೆ ನಡೆಸಿ, ಜಿಲ್ಲಾ ಪಂಚಾಯತ್ ಅಧ್ಯಕ್ಷರು ಮತ್ತು ಉಪಾಧ್ಯಕ್ಷರಿಗೆ ಆಹ್ವಾನ ನೀಡದೇ ಅವಮಾನ ಮಾಡಿ ಶಿಷ್ಟಾಚಾರವನ್ನು ಉಲ್ಲಂಘನೆ ಮಾಡಲಾಗಿದೆ ಎಂದು ಸಭೆಯ ಗಮನಕ್ಕೆ ತಂದರು.<br>ಮಾನ್ಯ ಸದಸ್ಯರಾದ ಶ್ರೀ ಬಾಲಕೃಷ್ಣರವರು ಮಾತನಾಡಿ ಯಾವುದೇ ಅಭಿವೃದ್ಧಿ ಕಾರ್ಯದ ಶಂಕುಸ್ಥಾಪನೆ ಹಾಗೂ ಉದ್ಘಾಟನೆಗೆ ಕಾರ್ಯಕ್ರಮಗಳಲ್ಲಿ ಶಿಷ್ಟಾಚಾರ ಅನುಸರಿಸಿ ಜಿಲ್ಲಾ ಉಸ್ತುವಾರಿ ಮಂತ್ರಿಗಳ ಹೆಸರನ್ನು ಹಾಕಲಾಗಿದೆ. ಆದರೆ ಸದರಿ ಕಾರ್ಯಕ್ರಮಗಳನ್ನು ನಡೆಸಲು ಅಡಚಣೆ ನೀಡಬಾರದು. ಜಿಲ್ಲಾ ಉಸ್ತುವಾರಿ ಮಂತ್ರಿಗಳನ್ನು ಕಾರ್ಯಕ್ರಮಕ್ಕೆ ಬರಬೇಡಿ ಎಂದು ಹೇಳುವುದಿಲ್ಲ. ತಮ್ಮ ಅನುಪಸ್ಥಿತಿಯಲ್ಲಿ ಕಾರ್ಯಕ್ರಮಗಳಿಗೆ ಹೋಗಬೇಡಿ ಎಂದು ಜಿಲ್ಲಾ ಉಸ್ತುವಾರಿ ಮಂತ್ರಿಗಳು ಅಧಿಕಾರಿಗಳನ್ನು ಹೆದರಿಸುವುದು, ಜಿಲ್ಲೆಯ ಅಭಿವೃದ್ಧಿ ದೃಷ್ಟಿಯಿಂದ ಒಳ್ಳೆಯ ಬೆಳವಣಿಗೆ ಆಗುವುದಿಲ್ಲ. ಈಗ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಮಾಡುತ್ತಿರುವ ಕಾಮಗಾರಿಗಳು ಮಾನ್ಯ ರೇವಣ್ಣರವರ ಅವಧಿಯಲ್ಲಿ ಮಂಜೂರು ಮಾಡಿದ ಕಾರ್ಯಕ್ರಮಗಳಾಗಿವೆ. ಜಿಲ್ಲೆಯ ಬಗ್ಗೆ ಕಾಳಜಿ ಇದ್ದರೆ ಜಿಲ್ಲಾ ಉಸ್ತುವಾರಿ | ಸಭೆಯಲ್ಲಿ ವಿವರವಾಗಿ ಚರ್ಚಿಸಿದಂತೆ, ಹಾಸನ ಜಿಲ್ಲೆಯಲ್ಲಿ 2007-08ನೇ ಸಾಲಿನಲ್ಲಿ ಮಂಜೂರು ಮಾಡಿ ರದ್ದುಪಡಿಸಿರುವ 13 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪುನರ್ ಮಂಜೂರಾತಿ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು.<br>ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸರಬರಾಜಿಗೆ ಸಂಬಂಧಿಸಿದಂತೆ, ಈಗಾಗಲೇ ಸಿದ್ದ ಪಡಿಸಿ ಸಲ್ಲಿಸಿರುವ ಕ್ರಿಯಾ ಯೋಜನೆಯ ಕಾಮಗಾರಿಗಳಿಗೆ ತುರ್ತಾಗಿ ಅನುದಾನವನ್ನು ಬಿಡುಗಡೆ ಮಾಡಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಸಭೆಯು ಸರ್ವಾನುಮತ<br>ದಿಂದ ತೀರ್ಮಾನಿಸಿತು.<br>ಹಾಗೂ ಹಾಸನ ಜಿಲ್ಲೆಯಲ್ಲಿ |

| | | | |
|---|---|---|---|
| | | ಮಂತ್ರಿಗಳು ಅನುದಾನವನ್ನು ತಂದು ಅಭಿವೃದ್ಧಿ ಮಾಡಿಸಲಿ. ಜಿಲ್ಲೆಗೆ ಆಗಮಿಸುವ ಎಲ್ಲಾ ಉಸ್ತುವಾರಿ ಸಚಿವರುಗಳನ್ನು **ಆತ್ಮೀಯ**ವಾಗಿ ಬರಮಾಡಿಕೊಂಡು ಸನ್ಮಾನ ಮಾಡಿ ಜಿಲ್ಲೆಗೆ ಬೇಕಾದ ಅನುದಾನವನ್ನು ಬಿಡುಗಡೆ ಮಾಡಲು ಕೋರಿದ್ದು, ಇದುವ**ರೆಗೂ** ಯಾವುದೇ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ. ಅವರುಗಳ ಕೊಡುಗೆ ಜಿಲ್ಲೆಗೆ ಏನು ಇದೆ? ಅನುದಾನ ಬಿಡುಗಡೆ**ಯಾಗದೆ** ಅಭಿವೃದ್ಧಿ ಕಾಮಗಾರಿಗಳು ಕುಂಠಿತವಾಗುತ್ತಿರುತ್ತವೆ, ಈ ಮೂಲಕ ಸರ್ಕಾರದ ಗಮನಕ್ಕೆ ತರಲು ಬಯಸುವುದಾಗಿ ಹೇಳಿದರು. **ಮುಂ**ದುವರೆದು ಜಿಲ್ಲೆಯ ಅಭಿವೃದ್ಧಿಗೆ ರಾಜಕೀಯ ಬೆರಸಿ ತೊಂದರೆ ಮಾಡುತ್ತಿದ್ದಾರೆ. ಬಸ್ ನಿಲ್ದಾಣ ಉದ್ಘಾಟನೆ ಆಗಿ ನಾಲ್ಕು **ತಿಂಗಳು** ಕಳೆದರೂ ಸಾರ್ವಜನಿಕರ ಉಪಯೋಗಕ್ಕೆ ನೀಡಿರುವುದಿಲ್ಲ. ಜಿಲ್ಲೆಯಲ್ಲಿ ಕೇಂದ್ರ ಸರ್ಕಾರದ ಶೇ.90 ಅನುದಾನ ಬಿಡುಗಡೆ **ಆಗಿ** ಅಭಿವೃದ್ಧಿ ಕಾರ್ಯಕ್ರಮಗಳು ಆಗುತ್ತಿವೆ. ರಾಜ್ಯ ಸರ್ಕಾರ ಜಿಲ್ಲೆಗೆ ಯಾವುದೇ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ. ಜಿಲ್ಲೆಯಲ್ಲಿ ಕಾರ್ಯಕ್ರಮಗಳು ಆಗುತ್ತಿವೆ. ರಾಜ್ಯ ಸರ್ಕಾರ ಜಿಲ್ಲೆಗೆ ಯಾವುದೇ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ. ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ನೂರಾರು ಕೋಟಿಗಳ ಬಿಲ್‌ಗಳು ಬಾಕಿ ಇದ್ದು ಪಾವತಿಯಾಗುತ್ತಿಲ್ಲ. ಜಿಲ್ಲೆಯಲ್ಲಿ **ಎಲ್ಲಾ** ರಸ್ತೆಗಳು ಗುಂಡಿ ಬಿದ್ದಿದ್ದು, ಅಪಘಾತಗಳು ಸಂಭವಿಸುತ್ತಿರುತ್ತವೆ. ಮೊದಲಿಗೆ ರಸ್ತೆಗಳ ಗುಂಡಿಗಳನ್ನು ಮುಚ್ಚಿಸಬೇಕಾಗಿದೆ.<br>ಆದ್ದರಿಂದ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಯಾವುದೇ ಅಭಿವೃದ್ಧಿ ಕಾರ್ಯಕ್ರಮಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನಾ ಕಾರ್ಯಕ್ರಮಗಳಿಗೆ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಇಲಾಖಾಧಿಕಾರಿಗಳು ಹಾಜರಾಗಲು ಸೂಚನೆ ನೀಡಬೇಕೆಂದು ಕೋರಿದರು.<br>ಮಾನ್ಯ ಸಕಲೇಶಪುರದ ಶಾಸಕರಾದ ಕುಮಾರಸ್ವಾಮಿರವರು ಮಾತನಾಡಿ, ಜಿಲ್ಲೆಯಲ್ಲಿ ಸಾರ್ವಜನಿಕ ಕೆಲಸಕ್ಕೆ **ತೊಂದರೆ** ನೀಡುವುದು ಬೇಸರದ ಸಂಗತಿ. ಅವರವರ ವ್ಯಾಪ್ತಿಯ ಕೆಲಸವನ್ನು ಅವರವರು ಮಾಡುವುದು ತಪ್ಪಿಲ್ಲ. ಜಿಲ್ಲಾ ಉಸ್ತು**ವಾರಿ** ಮಂತ್ರಿಗಳು ಅನುದಾನವನ್ನು ತಂದು ಕಾರ್ಯಕ್ರಮವನ್ನು ರೂಪಿಸಲಿ. ಜಿಲ್ಲೆಯ ಅಭಿವೃದ್ಧಿ ಕಾರ್ಯವನ್ನು ಮಾಡಲು ನಮಗೂ ಬಿಡದೇ ಅವರೂ ಮಾಡದೇ ಇದ್ದರೆ ಜಿಲ್ಲೆಯ ಅಭಿವೃದ್ಧಿಗೆ ಕುಂಠಿತವಾಗುತ್ತದೆ. ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾಡಲು ಬಿಡಿ, ಜಿಲ್ಲೆಯಲ್ಲಿ ಕಾಡಾನೆ ಹಾವಳಿ ಬಹಳ ಇದ್ದು, ಸಕಲೇಶಪುರದಿಂದ ಬೇಲೂರು ಅರಸೀಕೆರೆ ತನಕ ಕಾಡಾನೆ ದಾಳಿ ಮಾಡಿಕೊಂಡು ಬಂದಿದ್ದು, ಪ್ರಾಣಹಾನಿಗಳು ಸಂಭವಿಸಿರುತ್ತವೆ. ಜಿಲ್ಲಾ ಪಂಚಾಯತ್‌ನಲ್ಲಿ ಮಾನ್ಯ ಮಂತ್ರಿಗಳು ಸಭೆ ನಡೆಸಿದಾಗ ಸೌಜನ್ಯಕ್ಕಾದರೂ ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು ಉಪಾಧ್ಯಕ್ಷರನ್ನು ಆಹ್ವಾನಿಸದೇ ಇರುವುದು ವಿಷಾದನೀಯವಾದ ಸಂಗತಿ, ಈ ತಾರತಮ್ಯ ನಿಲ್ಲಿಸಬೇಕು ಎಂದು ತಿಳಿಸಿದರು.<br>ಸದಸ್ಯರಾದ ಶ್ರೀ ಸಿ.ಎನ್. ಬಾಲಕೃಷ್ಣರವರು ಮಾತನಾಡಿ ನಬಾರ್ಡ್ 13ಯೋಜನೆಯಡಿಯಲ್ಲಿ ಹಿಂದಿನ ಸರ್ಕಾರದಲ್ಲಿ 220ಪ್ರೌಢಶಾಲಾ ಕೊಠಡಿಗಳನ್ನು ಮಂಜೂರು ಮಾಡಲಾಗಿತ್ತು. ಈ ಸರ್ಕಾರದಲ್ಲಿ ಒಂದು ಪ್ರೌಢಶಾಲೆಯನ್ನು ಮಂಜೂರು ಮಾಡಿರುವುದಿಲ್ಲ ಎಂದು ಸಭೆಗೆ ತಿಳಿಸಿದರು.<br>ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡಿ ಅರಸೀಕೆರೆಯಲ್ಲಿ ಸಾಮರ್ಥ್ಯಸೌಧ ಕಟ್ಟಡ ಉದ್ಘಾಟನೆ ಕಾರ್ಯಕ್ರಮವನ್ನು ಮುಂದೂಡಲಾಗಿದೆ, ಮುಂದೂಡಲು ಕಾರಣವೇನು? ಇದರಿಂದ ಅರಸೀಕೆರೆ ತಾಲ್ಲೂಕಿನ ಎಲ್ಲಾ ಜಿಲ್ಲಾ ಪಂಚಾಯತ್ ಸದಸ್ಯರಿಗೆ ಅವಮಾನ ಮಾಡಲಾಗಿದೆ. ಜಿಲ್ಲಾಧಿಕಾರಿಗಳಿಗೆ ಅಥವಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ಏನಾದರೂ ಲಿಖಿತ ಆದೇಶ ಬಂದಿದೆಯೇ ಇದ್ದರೆ ಹಾಜರು ಪಡಿಸಿ ಎಂದು ಕೋರಿದರು. ಜಿಲ್ಲಾ ಉಸ್ತುವಾರಿ ಸಚಿವರಿಗೆ ಅಧಿಕಾರಿಗಳು ಕಾನೂನು ತಿಳುವಳಿಕೆ ನೀಡಬೇಕು ಎಂದು ಸಲಹೆ ನೀಡಿದರು. ಈ ಕುರಿತು ಸದಸ್ಯರಾದ ಶ್ರೀ ರಾಜಶೇಖರಪ್ಪ, ಶ್ರೀಮತಿ ಪ್ರೇಮನಿಂಗಪ್ಪರವರು ಸಹಮತ ವ್ಯಕ್ತಪಡಿಸಿದರು.<br>ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡಿ ಜಿಲ್ಲೆಯಲ್ಲಿ ಗ್ರಾಮೀಣ ಕುಡಿಯುವ ನೀರಿಗೆ ಬಹಳ ತೊಂದರೆ ಇದ್ದು, ನಾನ್ ಟಾರ್ಗೆಟ್ ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಾಗಿರುವುದಿಲ್ಲ, ಮುಂದಿನ 4–5 ದಿವಸಗಳಲ್ಲಿ ಮಂಜೂರಾತಿ ನೀಡಿ ಅನುದಾನ | 1000ಕ್ಕಿಂತ ಹೆಚ್ಚು ಗ್ರಾಮಗಳಲ್ಲಿ ಮದ್ಯವನ್ನು ಚಿಲ್ಲರೆ ಮಾರಾಟ ಮಾಡುತ್ತಿರುವ ಕುರಿತು ಲೋಕಾಯುಕ್ತರು ಮತ್ತು ಉಪ ಲೋಕಾಯುಕ್ತರು ಸೂಕ್ತ ತನಿಖೆ ನಡೆಸಿ, ಸಂಬಂಧಿಸಿದ ಅಬಕಾರಿ ಇಲಾಖೆಯ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ವರದಿ ನೀಡಲು ನಿರ್ಣಯಿಸಲು ಸಭೆಯು ಸರ್ವಾನುಮತದಿಂದ ಅನುಮೋದಿ ಸಿತು. |

| | | | |
|---|---|---|---|
| | | ಬಿಡುಗಡೆ ಮಾಡದಿದ್ದರೆ ಜಿಲ್ಲಾ ಪಂಚಾಯತಿಯಲ್ಲಿ ಉಗ್ರ ಪ್ರತಿಭಟನೆ ಮಾಡಲಾಗುವುದು ಎಂದು ತಿಳಿಸಿದರು. ಜಿಲ್ಲೆಯ ಅಭಿವೃದ್ಧಿ ಬಗ್ಗೆ ಸರ್ಕಾರ ಏನು ಕ್ರಮವನ್ನು ಕೈಗೊಂಡಿದೆ. ಮಾನ್ಯ ಶಾಸಕರಾದ ರೇವಣ್ಣರವರು ಜಿಲ್ಲೆಗೆ ಬಂದ ಎಲ್ಲಾ ಸಚಿವರುಗಳಿಗೆ ಗೌರವವನ್ನು ಸೂಚಿಸುತ್ತಿದ್ದಾರೆ. ತಾಳ್ಮೆಯನ್ನು ಪರೀಕ್ಷೆ ಮಾಡುವ ಕೆಲಸವನ್ನು ಸರ್ಕಾರ ಮಾಡಬಾರದು ಎಂದು ತಿಳಿಸಿದರು.<br>ಸದಸ್ಯರಾದ ಶ್ರೀ ಚಂದ್ರಶೇಖರ್ ಉ. ಅಣತಿ ಶೇಖರಣ್ಣನವರು ಮಾತನಾಡಿ ಪ್ರತಿ ಸಭೆಯಲ್ಲೂ ಕುಡಿಯುವ ನೀರಿನ ಸಮಸ್ಯೆ ಕುರಿತು ಚರ್ಚೆ ಮಾಡಲಾಗುತ್ತಿದ್ದು, ಯಾವುದೇ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ. ಇದರಿಂದ ಗ್ರಾಮೀಣ ಪ್ರದೇಶದ ಜನರಿಗೆ ಬಹಳ ತೊಂದರೆಯಾಗುತ್ತಿದೆ ಎಂದು ತಿಳಿಸಿದರು.<br>ಸದಸ್ಯರಾದ ಶ್ರೀ ಸಿ.ಎಸ್. ಪ್ರಕಾಶ್‌ರವರು ಮಾತನಾಡಿ ಬೇಲೂರು ತಾಲ್ಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆ ಸಚಿವರ ಕಾರ್ಯಕ್ರಮಕ್ಕೆ ಶಾಲಾ ಮಕ್ಕಳನ್ನು ಕರೆತಂದು ಮಕ್ಕಳು ಬಿಸಿಲಿನಲ್ಲಿ ಒಣಗುವಂತೆ ಮಾಡಿರುತ್ತಾರೆ. ಇದಕ್ಕೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು ಹೊಣೆಗಾರರಾಗಿದ್ದು, ಅವರಿಗೆ ನೋಟೀಸ್ ನೀಡಬೇಕು, ಸದರಿ ಕಾರ್ಯಕ್ರಮದ ಮಾಹಿತಿಯನ್ನು ಜಿಲ್ಲಾ ಪಂಚಾಯತ್ ಸದಸ್ಯರಿಗೆ ತಡವಾಗಿ ತಿಳಿಸುತ್ತಿದ್ದಾರೆ ಎಂದು ಸಭೆಯ ಗಮನಕ್ಕೆ ತಂದರು.<br>ಮಾನ್ಯ ಉಪಾಧ್ಯಕ್ಷರು ಮಾತನಾಡಿ ನಾವು ಸಹ ಸದರಿ ಕಾರ್ಯಕ್ರಮಕ್ಕೆ ಹೋಗಿದ್ದು, ಕಾರ್ಯಕ್ರಮ ಪ್ರಾರಂಭವಾಗುವುದು ತಡವಾದುದರಿಂದ ಇತರೆ ಕಾರ್ಯಕ್ರಮಕ್ಕೆ ಹೋಗಬೇಕಾದ್ದರಿಂದ ಅಲ್ಲಿಂದ ವಾಪಸ್ಸು ಬಂದಿದ್ದಾಗಿ ಸಭೆಗೆ ತಿಳಿಸಿದರು.<br>ಮಾನ್ಯ ಶಾಸಕರಾದ ಶ್ರೀ ಸಿ.ಎಸ್.ಪುಟ್ಟೇಗೌಡರವರು ಮಾತನಾಡಿ ಜಿಲ್ಲೆಯಲ್ಲಿ ವಿಭಿನ್ನವಾದ ಸನ್ನಿವೇಶ ಸೃಷ್ಟಿಯಾಗಿದ್ದು, ಅಧಿಕಾರಿಗಳು ನಮ್ಮನ್ನು ತಪ್ಪು ತಿಳಿಯಬೇಡಿ ನಿಮ್ಮ ಕಾರ್ಯಕ್ರಮಕ್ಕೆ ಬರಲು ಸಾಧ್ಯವಾಗುತ್ತಿಲ್ಲ ಎಂದು ಹೇಳುತ್ತಾರೆ. ಹಾಸನ ಜಿಲ್ಲೆ ಸುಸಂಸ್ಕೃತ ಹಾಗೂ ಸಜ್ಜನಿಕೆಗೆ ಪ್ರಶಸ್ತವಾದದ್ದು, ರಾಜಕೀಯ ಭಿನ್ನಾಭಿಪ್ರಾಯ ಏನೇ ಇದ್ದರೂ ಜಿಲ್ಲೆಗೆ ಬಂದ ಎಲ್ಲಾ ಸಚಿವರನ್ನು ಸನ್ಮಾನಿಸಲಾಗಿದೆ. ಈ ಜಿಲ್ಲೆಯು ದೇಶಕ್ಕೆ ಪ್ರಧಾನಿಯನ್ನು ಕೊಟ್ಟ ಜಿಲ್ಲೆಯಾಗಿದೆ. ಜಿಲ್ಲೆಗೆ ಜಿಲ್ಲಾ ಉಸ್ತುವಾರಿ ಸಚಿವರು ಬರುವುದು, ಹೋಗುವುದು ನಮಗೆ ಮಾಹಿತಿಯೇ ಇರುವುದಿಲ್ಲ. ಯಾವುದೇ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆಗೆ ಮಾನ್ಯ ಮಂತ್ರಿಗಳನ್ನು ಕಾಯಲು ಸಾಧ್ಯವಿಲ್ಲ ಎಂದು ಹೇಳಿದರು.<br>ಮಾನ್ಯ ಶಾಸಕರಾದ ಶ್ರೀ ಹೆಚ್.ಡಿ.ರೇವಣ್ಣರವರು ಮಾತನಾಡಿ ಜಿಲ್ಲಾ ಪಂಚಾಯತ್ ಅಧ್ಯಕ್ಷರ ಹಿಡಿತದಲ್ಲಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಅಧಿಕಾರಿಗಳು ಇದ್ದಾರೆಯೇ, ಇಲ್ಲವೆ ಎಂಬುದನ್ನು ತಿಳಿಸಬೇಕು. ಜಿಲ್ಲಾ ಉಸ್ತುವಾರಿ ಸಚಿವರೇ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತ್‌ನ ಕಾಮಗಾರಿಗಳಲ್ಲಿ ಹಸ್ತಕ್ಷೇಪ ಮಾಡುವುದಾದರೆ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಯನ್ನು ವಜಾ ಮಾಡಿ ಇಲ್ಲದಿದ್ದರೆ ಅವರವರ ಕ್ಷೇತ್ರದ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆಯನ್ನು ಮಾಡಲು ಅವಕಾಶ ಮಾಡಿ ಜಿಲ್ಲಾ ಪಂಚಾಯತ್ ಅಧ್ಯಕ್ಷರ ಕಾರ್ಯಕ್ರಮಕ್ಕೆ ಅಧಿಕಾರಿಗಳು ಬರದೇ ಶಿಷ್ಟಾಚಾರವನ್ನು ಉಲ್ಲಂಘನೆ ಮಾಡಿದ್ದು, ಅವರನ್ನು ಕಾರ್ಯಕ್ರಮಕ್ಕೆ ಬರಬೇಡಿ ಎಂದು ಯಾರು ಆದೇಶಿಸಿರುವರು ಇದು ಹೀಗೆ ಮುಂದುವರೆದರೆ ಮುಂದೆ ಆಗುವ ಅನಾಹುತಗಳಿಗೆ ಜಿಲ್ಲಾಧಿಕಾರಿಗಳು, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜವಾಬ್ದಾರರಾಗುತ್ತಾರೆ ಎಂದು ತಿಳಿಸಿದರು. ಜಿಲ್ಲೆಯಲ್ಲಿ ಅಬಕಾರಿ ಇಲಾಖೆಯ ಅಧಿಕಾರಿಗಳು ಪ್ರತಿ ಬ್ರಾಂದಿ ಅಂಗಡಿಯಿಂದ ರೂ 10,000 ದಿಂದ ರೂ 15,000ವರೆಗೆ ವಸೂಲಿ ಮಾಡುತ್ತಿದ್ದಾರೆ, ಸಿ.ಎಲ್–2 ಪ್ರಕಾರ ಅಂಗಡಿಯನ್ನು ಬೆಳಿಗ್ಗೆ 10.00ಗಂಟೆಗೆ ತೆರೆಯುವ ಬದಲು ಬೆಳಿಗ್ಗೆ 8.00ಗಂಟೆಗೆ ತೆರೆಯಲಾಗುತ್ತಿದೆ ಈ ಬಗ್ಗೆ ಏನು ಕ್ರಮವನ್ನು ಕೈಗೊಳ್ಳಲಾಗಿದೆ. ಪ್ರತಿಯೊಂದು ಗ್ರಾಮದ ಚಹಾ ಅಂಗಡಿಯಲ್ಲಿ ಬ್ರಾಂದಿ ಮಾರಾಟ ಮಾಡಲಾಗುತ್ತಿದೆ ಎಂದು ಪ್ರಶ್ನಿಸಿದರು. | |

| | | |
|---|---|---|
| | ಉಪ ಆಯುಕ್ತರು, ಅಬಕಾರಿ ಇಲಾಖೆರವರು ಉತ್ತರಿಸುತ್ತಾ ಸಿ.ಎಲ್.-2 ಅಂಗಡಿಯನ್ನು ಬೆಳಿಗ್ಗೆ 10.00ಗಂಟೆಯಿಂದ ರಾತ್ರಿ 10.30ಗಂಟೆವರೆಗೆ ಮಾತ್ರ ತೆರೆಯಬೇಕಾಗಿದೆ. ಯಾವ ಅಂಗಡಿಯಿಂದಲೂ ಹಣವನ್ನು ವಸೂಲಿ ಮಾಡುತ್ತಿಲ್ಲಾ ಹಾಗೂ ಹಳ್ಳಿಗಳಲ್ಲಿ ಬ್ರಾಂದಿ ಚಿಲ್ಲರೆ ಮಾರಾಟ ಮಾಡುತ್ತಿರುವುದು ಗಮನಕ್ಕೆ ಬಂದಿರುವುದಾಗಿ ತಿಳಿಸಿದರು.<br>ಮಾನ್ಯ ಶಾಸಕರಾದ ಶ್ರೀ ಹೆಚ್.ಡಿ. ರೇವಣ್ಣರವರು ಮಾತನಾಡುತ್ತಾ ಎರಡೂವರೆ ವರ್ಷಗಳಲ್ಲಿ ಎಷ್ಟು ಅಂಗಡಿಗೆ ದಂಡವನ್ನು ಹಾಕಲಾಗಿದೆ, ಸೆಕೆಂಡ್ಸ್‌ನ್ನು ಮಾರಲು ಕಾನೂನಿನಲ್ಲಿ ಅವಕಾಶ ಇದೆಯೇ, ತನಿಖೆಯನ್ನು ಮಾಡಬೇಕು. ಮಂತ್ರಿಗಳ ಹೆಸರನ್ನು ಹೇಳಿಕೊಂಡು ಹಣ ವಸೂಲಿ ಮಾಡಿ ಅವರ ಹೆಸರನ್ನು ಕೆಡಿಸಬೇಡಿ, ಸರ್ಕಾರಕ್ಕೆ ಬರಬೇಕಾದ ರೆವಿನ್ಯೂ ಸಹ ನಷ್ಟವಾಗುತ್ತಿದೆ. ಕಮರ್ಷಿಯಲ್ ಟ್ಯಾಕ್ಸ್‌ಗೂ ಸಹ ವಂಚನೆ ಮಾಡಲಾಗುತ್ತಿದೆ. ಇದು ಕಾನೂನು ಬಾಹಿರ. ಆದ್ದರಿಂದ ಲೋಕಾಯುಕ್ತ ಅಥವಾ ಉಪಲೋಕಾಯುಕ್ತ ಅಧಿಕಾರಿಗಳಿಗೆ ಸಮಗ್ರ ತನಿಖೆ ನಡೆಸಲು ಜಿಲ್ಲಾ ಪಂಚಾಯತ್‌ನಲ್ಲಿ ನಿರ್ಣಯವನ್ನು ಕೈಗೊಂಡು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ತಿಳಿಸಿದರು. ಮುಂದುವರೆದು, ಮಾತನಾಡುತ್ತಾ, ಹಾಸನ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಬಹಳ ಇದ್ದು, ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ. ಜಿಲ್ಲಾ ಪಂಚಾಯತ್ ಅಧ್ಯಕ್ಷರು ರಾಜ್ಯ ಸಚಿವ ಸಂಪುಟ ದರ್ಜೆ ಹುದ್ದೆಗೆ ಸಮನಾದ ಸ್ಥಾನವನ್ನು ಹೊಂದಿದ್ದು, ಜಿಲ್ಲಾ ಪಂಚಾಯತ್ ಅಧ್ಯಕ್ಷರಿಗೆ ಅಗೌರವ ತರುವ ಕೆಲಸ ಮಾಡಬಾರದು ಎಂದು ಸಭೆಯ ಗಮನಕ್ಕೆ ತಂದರು<br>ಇತ್ತೀಚೆಗೆ ಜಿಲ್ಲಾ ಪಂಚಾಯತ್ ಮಾನ್ಯ ಅಧ್ಯಕ್ಷರು ಹೊಳೆನರಸೀಪುರದಲ್ಲಿ ಉದ್ಘಾಟನಾ ಕಾರ್ಯಕ್ರಮ ಹಮ್ಮಿಕೊಂಡಿದ್ದು ಕಾರ್ಯಪಾಲಕ ಇಂಜಿನಿಯರ್‌ರವರು ಬಂದಿರುವುದಿಲ್ಲ. ಅವರ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು.<br>ಕಾರ್ಯಪಾಲಕ ಇಂಜಿನಿಯರ್, ಚನ್ನರಾಯಪಟ್ಟಣರವರು ಮಾತನಾಡುತ್ತಾ, ಮಾನ್ಯ ಉಸ್ತುವಾರಿ ಮಂತ್ರಿಗಳು ನನ್ನ ಗಮನಕ್ಕೆ ತಂದು ಕಾರ್ಯಕ್ರಮ ಮಾಡಬೇಕು ಇಲ್ಲದಿದ್ದರೆ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದರಿಂದ ನಾನು ಸಭೆಗೆ ಹಾಜರಾಗಲಿಲ್ಲವೆಂದು ಸಭೆಯ ಗಮನಕ್ಕೆ ತಂದರು.<br>ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡಿ ತಮ್ಮ ಕ್ಷೇತ್ರದಲ್ಲಿ ರೂ 25,000 ವೆಚ್ಚದಲ್ಲಿ ನಿರ್ಮಿಸಲಾಗಿರುವ ಶೌಚಾಲಯವನ್ನು ಉದ್ಘಾಟನೆ ಮಾಡಬೇಕಾಗಿದ್ದು, ಸದರಿ ಉದ್ಘಾಟನೆ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು ಬರುವರೇ ಅಥವಾ ಅವರು ಬರುವವರೆಗೆ ಉದ್ಘಾಟನೆ ಮಾಡಬಾರದೆ ದಯಮಾಡಿ ತಿಳಿಸಿ ಎಂದು ಕೇಳಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮಾತನಾಡುತ್ತಾ, ಶಿಷ್ಟಾಚಾರದ ಬಗ್ಗೆ ಈಗಾಗಲೇ ಅಧಿಕಾರಿಗಳಿಗೆ ಮೌಖಿಕವಾಗಿ ತಿಳಿಸಲಾಗಿದೆ. ಯಾವುದೇ ಕಾರ್ಯಕ್ರಮವನ್ನು ಮಾಡುವಾಗ ಸಂಬಂಧಿಸಿದ ಜನಪ್ರತಿನಿಧಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಯಶಸ್ವಿಯಾಗಿ ಕಾರ್ಯಕ್ರಮವನ್ನು ಮಾಡಬೇಕೆಂದು, ಜಿಲ್ಲೆಯಲ್ಲಿ ನಡೆಯುವ ಎಲ್ಲಾ ಕಾರ್ಯಕ್ರಮಗಳಲ್ಲಿ ಶಿಷ್ಟಾಚಾರವನ್ನು ಪಾಲಿಸಲು ತಿಳಿಸಲಾಗಿದೆ ಎಂದು ತಿಳಿಸಿದರು.<br>ಮಾನ್ಯ ಶಾಸಕರಾದ ಶ್ರೀ ಹೆಚ್.ಡಿ.ರೇವಣ್ಣರವರು ಮಾತನಾಡುತ್ತಾ ಶಿಷ್ಟಾಚಾರದ ಅನ್ವಯ ಕಾರ್ಯಕ್ರಮವನ್ನು ಮಾಡಿ ಜಿಲ್ಲಾ ಉಸ್ತುವಾರಿ ಮಂತ್ರಿಗಳಿಗೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಕಾರ್ಯಕ್ರಮದ ಬಗ್ಗೆ ತಿಳಿಸಲಿ, ಜಿಲ್ಲಾ ಪಂಚಾಯತ್ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರಿಗೆ ಏನು ಗೌರವವನ್ನು ನೀಡಬೇಕು ಅದನ್ನು ನೀಡಿ, ಅದನ್ನು ಬಿಟ್ಟು ಜಿಲ್ಲಾ ಪಂಚಾಯತ್ ಅಧ್ಯಕ್ಷರು ಪರಿಶಿಷ್ಟ ಜಾತಿ ಮಹಿಳೆ ಎಂದು ಕಡೆಗಣಿಸಬಾರದು. ಜಿಲ್ಲೆಯಲ್ಲಿ ನಡೆಯುತ್ತಿರುವ ಕಾರ್ಯಕ್ರಮಕ್ಕೆ ಮಾನ್ಯ ಜಿಲ್ಲಾ ಪಂಚಾಯತ್ ಅಧ್ಯಕ್ಷರನ್ನು ಆಹ್ವಾನಿಸದೆ, ಜಿಲ್ಲಾ ಉಸ್ತುವಾರಿ ಸಚಿವರೆ ಎಲ್ಲಾ ಕಾರ್ಯಕ್ರಮಗಳನ್ನು ಉದ್ಘಾಟನೆ ಮತ್ತು ಶಂಕುಸ್ಥಾಪನೆ ಮಾಡಿ, ಅಧ್ಯಕ್ಷರನ್ನು ಕಡೆಗಣಿಸಿರುತ್ತಾರೆ ಎಂದು ತಿಳಿದು ಬಂದಿದ್ದು, ಈ ಬಗ್ಗೆ ಮಾನ್ಯ ಸಚಿವರು ಕ್ಷಮೆ ಯಾಚಿಸಬೇಕು ಎಂದು ಖಂಡನಾ ನಿರ್ಣಯವನ್ನು ಕೈಗೊಳ್ಳಲು ಸಭೆಯಲ್ಲಿ ತೀರ್ಮಾನಿಸಲಾಯಿತು. | |

ಮಾನ್ಯ ಶಾಸಕರಾದ ಶ್ರೀ ಹೆಚ್.ಕೆ.ಕುಮಾರಸ್ವಾಮಿರವರು ಮಾತನಾಡಿ, ತಾಲ್ಲೂಕಿನ ಶಾಸಕರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸುವುದು ಶಿಷ್ಟಾಚಾರ ಆದರೆ ಜಿಲ್ಲಾ ಮಂತ್ರಿಗಳನ್ನು ಆಹ್ವಾನಿಸುವುದು ಸಂಪ್ರದಾಯವಾಗಿದ್ದು, ಅದು ಕಡ್ಡಾಯವಲ್ಲ. ಔಪಚಾರಿಕವಾಗಿ ಕರೆಯುವುದು ರೂಢಿಯಲ್ಲಿದೆ. ಅವರು ಜಿಲ್ಲೆಯ ಅಭಿವೃದ್ಧಿ ಕುರಿತು ಪರಿಶೀಲನೆ ನಡೆಸಬಹುದು, ನಿರ್ದೇಶನ ಮಾಡುವ ಹಾಗಿಲ್ಲ ಎಂದು ಸಭೆಯ ಗಮನಕ್ಕೆ ತಂದರು.

ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡಿ ಒಂದು ವಾರದೊಳಗೆ ಸಂಬಂಧಿಸಿದ ಕ್ಷೇತ್ರದ ಶಾಸಕರು ಜಿಲ್ಲೆಯಲ್ಲಿ ಆಗಬೇಕಾಗಿರುವ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಮಾಡಲು ಕಾರ್ಯಕ್ರಮದಲ್ಲಿ ಸಂಬಂಧಿಸಿದ ಅಧಿಕಾರಿಗಳು ಹಾಜರಿರುವಂತೆ ಸೂಚಿಸಲು ಸೂಕ್ತ ಕ್ರಮವನ್ನು ಕೈಗೊಳ್ಳಬೇಕೆಂದು ತಿಳಿಸಿದರು.

ಮಾನ್ಯ ಶಾಸಕರಾದ ಶ್ರೀ ಹೆಚ್.ಡಿ.ರೇವಣ್ಣರವರು ಮಾತನಾಡಿ ಜಿಲ್ಲಾ ಪಂಚಾಯತ್‌ನ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಅಧ್ಯಕ್ಷರ ಕಾರ್ಯಕ್ರಮದಲ್ಲಿ ಹಾಜರಿರಲು ಕಟ್ಟುನಿಟ್ಟಿನ ಸೂಚನೆಯನ್ನು ನೀಡಬೇಕೆಂದು ತಿಳಿಸಿದರು.

ಸದಸ್ಯರಾದ ಶ್ರೀ ಹೆಚ್.ಎಸ್. ಶಂಕರ್‌ರವರು ಮಾತನಾಡಿ ಈಗಾಗಲೇ ತಯಾರಿಸಿರುವ ಕುಡಿಯುವ ನೀರಿನ ಕ್ರಿಯಾ ಯೋಜನೆಗೆ ಸರ್ಕಾರ ಮಂಜೂರಾತಿ ನೀಡಿರುವುದಿಲ್ಲ. ಹಳ್ಳಿಗಳಲ್ಲಿ ಕುಡಿಯುವ ನೀರಿಗೆ ಬಹಳ ತೊಂದರೆಯಾಗಿರುತ್ತದೆ. ಜಿಲ್ಲಾ ಪಂಚಾಯತ್ ಅವಶ್ಯಕತೆ ಇಲ್ಲದಿದ್ದರೆ ವಜಾ ಮಾಡಿ ಎಂದು ತಿಳಿಸಿದರು.

ಸದಸ್ಯರಾದ ಶ್ರೀ ಬಾಲಕೃಷ್ಣರವರು ಮಾತನಾಡುತ್ತಾ, ರೂ 25.00ಕೋಟಿ ಅನುದಾನವನ್ನು ಮಾನ್ಯ ಮುಖ್ಯಮಂತ್ರಿಗಳು ಜಿಲ್ಲೆಯ ಅಭಿವೃದ್ಧಿಗೆ ಬಿಡುಗಡೆ ಮಾಡುತ್ತೇವೆ ಎಂದು ಆಶ್ವಾಸನೆ ನೀಡಿದ್ದು, ಇದುವರೆಗೂ ಯಾವುದೇ ವಿಶೇಷ ಅನುದಾನವನ್ನು ಜಿಲ್ಲೆಗೆ ಬಿಡುಗಡೆ ಮಾಡಿರುವುದಿಲ್ಲ ಎಂದು ಹೇಳಿದರು.

ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡಿ ಸಕಲೇಶಪುರದಲ್ಲಿ ಈಗಾಗಲೇ ಮಿನಿ ವಿಧಾನಸೌಧ ಕಾಮಗಾರಿ ಪೂರ್ಣಗೊಂಡಿದ್ದು, ಅದರ ಸದುಪಯೋಗ ಸಾರ್ವಜನಿಕರಿಗೆ ತಲುಪಿಲ್ಲ, ಆದಷ್ಟು ಬೇಗ ಉದ್ಘಾಟನೆ ಮಾಡಿ ಜನರಿಗೆ ಉಪಯೋಗವಾಗುವಂತೆ ಮಾಡಬೇಕೆಂದು ತಿಳಿಸಿದರು.

ಸದಸ್ಯರಾದ ಶ್ರೀಮತಿ ಕಾಮಾಕ್ಷಿ ರಾಜುರವರು ಮಾತನಾಡಿ ಬೇಲೂರು ತಾಲ್ಲೂಕು ಹನಿಕೆ ಗ್ರಾಮದ ವಿದ್ಯಾರ್ಥಿನಿಲಯದ ಕಾಮಗಾರಿ ಕಳಪೆ ಮಟ್ಟದಿಂದ ಕೂಡಿದ್ದು, ಈ ಬಗ್ಗೆ ಸರ್ಕಾರಕ್ಕೆ ಈಗಾಗಲೇ ವರದಿಯನ್ನು ಕಳುಹಿಸಲಾಗಿದೆ. ಸದರಿ ಕಟ್ಟಡಕ್ಕೆ ಸುಣ್ಣಬಣ್ಣವನ್ನು ಬಳಿದು ಉದ್ಘಾಟನೆಯನ್ನು ನೆರವೇರಿಸಲಾಗಿದೆ ಈ ಬಗ್ಗೆ ಸೂಕ್ತ ಕ್ರಮವನ್ನು ಕೈಗೊಳ್ಳಬೇಕೆಂದು ಕೋರಿದರು.

ಮಾನ್ಯ ಶಾಸಕರಾದ ಶ್ರೀ ರೇವಣ್ಣರವರು ಮಾತನಾಡಿ ಜಿಲ್ಲೆಗೆ ಮಂಜೂರಾಗಿ ರದ್ದಾಗಿರುವ 13 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಮರುಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವುದು ಹಾಗೂ ಕುಡಿಯುವ ನೀರಿನ ಕಾಮಗಾರಿಗಳಿಗೆ ತುರ್ತಾಗಿ ಅನುದಾನವನ್ನು ಬಿಡುಗಡೆ ಮಾಡಲು ಪ್ರಸ್ತಾವನೆ ಸಲ್ಲಿಸಬೇಕು ಹಾಗೂ ಜಿಲ್ಲೆಯ 1000ಕ್ಕಿಂತ ಹೆಚ್ಚು ಹಳ್ಳಿಗಳಲ್ಲಿ ಮದ್ಯವನ್ನು ಚಿಲ್ಲರೆ ಮಾರಾಟ ಮಾಡುತ್ತಿರುವ ಕುರಿತು ಸೂಕ್ತ ತನಿಖೆ ನಡೆಸಲು ಹಾಗೂ ಸಂಬಂಧಿಸಿದ ಅಬಕಾರಿ ಇಲಾಖೆಯ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ವರದಿ ನೀಡಲು ಸಭೆಯಲ್ಲಿ ನಿರ್ಣಯಿಸಿ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು.

**ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು**

| | | | |
|---|---|---|---|
| | 2011–12ನೇ ಸಾಲಿನ ವಾರ್ಷಿಕ ಯೋಜನೆ ಯನ್ನು ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವ ಬಗ್ಗೆ. | ಟಿಪ್ಪಣಿ ಸಂಖ್ಯೆ: ಯೋವಿ(3) ಕರಡು ವಾ.ಯೋ/ 198/2010–11 ದಿನಾಂಕ: 03–12–2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>2011–12ನೇ ಸಾಲಿಗೆ ಜಿಲ್ಲಾ ಪಂಚಾಯತ್‌ನ ಕರಡು ವಾರ್ಷಿಕ ಯೋಜನೆ ತಯಾರಿಸಲು ಸರ್ಕಾರದ ಸೂಚನೆಯಂತೆ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಇಲಾಖೆಗಳಿಗೆ 2010–11ನೇ ಸಾಲಿಗೆ ನಿಗದಿಯಾಗಿರುವ ಅನುದಾನಕ್ಕೆ ಶೇ.10ರಷ್ಟು ಹೆಚ್ಚುವರಿ ಸೇರಿಸಿ ಕರಡು ಯೋಜನೆಯನ್ನು ಸಿದ್ದಪಡಿಸುವಂತೆ ತಿಳಿಸಲಾಗಿದ್ದು, ಆದ್ಯತೆ ಮೇಲೆ ಇನ್ನೂ ಕೆಲವು ಯೋಜನೆಗಳಿಗೆ ಹೆಚ್ಚು ಅನುದಾನಕ್ಕೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯ ಅನುಮೋದನೆಗೆ ವಿಷಯವನ್ನು ಮಂಡಿಸಿದೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>2011–12ನೇ ಸಾಲಿಗೆ ಹಾಸನ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ವಿವಿಧ ಇಲಾಖೆಗಳಿಗೆ 2010–11ನೇ ಸಾಲಿಗೆ ನಿಗದಿಪಡಿಸಿರುವ ಅನುದಾನಕ್ಕೆ ಶೇ.10ರಷ್ಟು ಹೆಚ್ಚುವರಿಯಾಗಿ ಮತ್ತು ಆದ್ಯತೆ ಮೇಲೆ ಇತರೆ ಯೋಜನೆಗಳಿಗೆ ಹೆಚ್ಚು ಅನುದಾನವನ್ನು ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಿದ್ದಪಡಿಸಿರುವ ಕರಡು ವಾರ್ಷಿಕ ಯೋಜನೆಗೆ ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು. |
| 2 | ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ತಾಲ್ಲೂಕು ಪಂಚಾಯತ್ / ಗ್ರಾಮ ಪಂಚಾಯತ್ ಕೇಂದ್ರಗಳಲ್ಲಿ ನಿರ್ಮಿಸಬೇಕಾದ ಭಾರತ್ ನಿರ್ಮಾಣ್ ರಾಜೀವ್ ಗಾಂಧಿ ಸೇವಾ ಕೇಂದ್ರ ಕಟ್ಟಡಗಳ ನಿರ್ಮಾಣಕ್ಕೆ ಕಾರ್ಯ ನಿರ್ವಹಣಾ ಏಜನ್ಸಿಯನ್ನು ನಿಗದಿಪಡಿಸುವ ಕುರಿತು. | ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಭಿ(3)5/ಉಖಾಯೋ/2010–11 ದಿನಾಂಕ: 03–12–2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ತಾಲ್ಲೂಕು ಪಂಚಾಯತ್ / ಗ್ರಾಮ ಪಂಚಾಯತ್ ಕೇಂದ್ರಗಳಲ್ಲಿ ಕ್ರಮವಾಗಿ ರೂ.25.00ಲಕ್ಷ ಹಾಗೂ ರೂ.10.00ಲಕ್ಷಗಳ ಅನುದಾನದಲ್ಲಿ ಭಾರತ್ ನಿರ್ಮಾಣ್ ರಾಜೀವ್ ಗಾಂಧಿ ಸೇವಾ ಕೇಂದ್ರ ಕಟ್ಟಡಗಳನ್ನು ನಿರ್ಮಾಣ ಮಾಡಲು ಭಾರತ ಸರ್ಕಾರವು ಮಾರ್ಗಸೂಚಿಯನ್ನು ಹೊರಡಿಸಿದ್ದು, ಇದರಂತೆ, ಸದರಿ ಕಾಮಗಾರಿಗಳನ್ನು ಪ್ರಾರಂಭಿಸಲು ನಿರ್ದೇಶಕರು ತಿಳಿಸಿರುತ್ತಾರೆ. ಆದ್ದರಿಂದ, ಸದರಿ ಕಟ್ಟಡಗಳ ಅನುಷ್ಟಾನವನ್ನು ಮಾಡಲು ಕಾರ್ಯನಿರ್ವಹಣಾ ಅನುಷ್ಟಾನ ಏಜನ್ಸಿಯನ್ನು ನಿಗದಿಪಡಿಸುವ ವಿಷಯವನ್ನು ಸಭೆಯ ನಿರ್ಣಯಕ್ಕೆ ಮಂಡಿಸಿದೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್ ಕೇಂದ್ರ ಸ್ಥಾನಗಳಲ್ಲಿ ಕ್ರಮವಾಗಿ ರೂ.25.00ಲಕ್ಷ ಹಾಗೂ ರೂ.10.00ಲಕ್ಷಗಳ ಅನುದಾನದಲ್ಲಿ ಭಾರತ್ ನಿರ್ಮಾಣ್ ರಾಜೀವ್ ಗಾಂಧಿ ಸೇವಾ ಕೇಂದ್ರ ಕಟ್ಟಡಗಳನ್ನು ನಿರ್ಮಾಣ ಮಾಡುವ ಕೆಲಸವನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ /ಕರ್ನಾಟಕ ಭೂ ಸೇನಾ ನಿಗಮಗಳ ಮೂಲಕ ಅನುಷ್ಟಾನ ಮಾಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 3 | ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ತಾಲ್ಲೂಕು/ ಗ್ರಾಮ ಪಂಚಾಯತ್ ಕಛೇರಿಗಳ ಉಪಯೋಗಕ್ಕಾಗಿ ಕಂಪ್ಯೂಟರ್ ಮತ್ತು ಇತರೆ ಸಾಮಗ್ರಿಗಳನ್ನು ಖರೀದಿಸಲು ಅನುಮೋದನೆ ನೀಡುವ ಕುರಿತು. | ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಭಿ(3)/109/ಉಖಾಯೋ/2010–11 ದಿನಾಂಕ: 03–12–2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಭಾರತ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯದಿಂದ IT, revolution at grass root level ಬಗ್ಗೆ ಪ್ರಸ್ತಾಪಿಸಿದ್ದು, ಇದನ್ನು ಸಾಧಿಸಲು ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಕನಿಷ್ಠ ಒಂದು ಕಂಪ್ಯೂಟರ್ ಹಾಗೂ Intrenet connectivitiy ಮತ್ತು ತಾಲ್ಲೂಕುಗಳಲ್ಲಿ ಕನಿಷ್ಠ 6 ಕಂಪ್ಯೂಟರ್ ಇರುವಂತೆ ನೋಡಿಕೊಳ್ಳಬೇಕೆಂದು ಹಾಗೂ ಅಗತ್ಯ ಮೂಲ ಸೌಲಭ್ಯಗಳು ಲಭ್ಯವಿರುವಂತೆ ವ್ಯವಸ್ಥೆ ಮಾಡಲು ನಿರ್ದೇಶಿಸಿರುತ್ತಾರೆ. ಇದರ ಸಲುವಾಗಿ ತಾಲ್ಲೂಕು ಮಟ್ಟದಲ್ಲಿ ಕಂಪ್ಯೂಟರ್‌ಗಳು, ಲೇಸರ್ ಪ್ರಿಂಟರ್, ಫೋಟೋ ಪ್ರಿಂಟರ್, ಜೆರಾಕ್ಸ್ ಯಂತ್ರ, ಯು.ಪಿ.ಎಸ್ ಕ್ಯಾಮರಾ, ಎಲ್.ಸಿ.ಡಿ ಮತ್ತು ಸ್ಕ್ರೀನ್ ತಾಲ್ಲೂಕಿಗೆ ಒಂದರಂತೆ ಲ್ಯಾಪ್ ಟ್ಯಾಪ್‌ಗಳು ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗೋದ್ರೇಜ್ ಆಲ್ಮೇರಾ, ಪಿ.ಡಿ.ಓ ಗೆ ಛೇರ್ ಮತ್ತು ಟೇಬಲ್ ಯು.ಪಿ.ಎಸ್ ಮತ್ತು ಪ್ಲಾಸ್ಟಿಕ್ ಛೇರ್‌ಗಳನ್ನು ಅಗತ್ಯಾನುಸಾರ ಖರೀದಿ ನಿಯಮಗಳನ್ನು ಪಾಲಿಸಿಕೊಂಡು ಖರೀದಿಸಲು ಅನುಮೊದಿಸುವ ಬಗ್ಗೆ ವಿಷಯವನ್ನು ಸಭೆಯ ನಿರ್ಣಯಕ್ಕೆ ಮಂಡಿಸಿದೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಭಾರತ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯದಿಂದ IT, revolution at grass root level ಬಗ್ಗೆ ಪ್ರಸ್ತಾಪಿಸಿದ್ದು, ಇದನ್ನು ಸಾಧಿಸಲು ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಕನಿಷ್ಠ ಒಂದು ಕಂಪ್ಯೂಟರ್ ಹಾಗೂ Intrenet connectivitiy ಮತ್ತು ತಾಲ್ಲೂಕು ಗಳಲ್ಲಿ ಕನಿಷ್ಠ 6 ಕಂಪ್ಯೂಟರ್ ಇರುವಂತೆ ನೋಡಿಕೊಳ್ಳಬೇಕೆಂದು ಹಾಗೂ ಅಗತ್ಯ ಮೂಲ ಸೌಲಭ್ಯಗಳು ಲಭ್ಯವಿರುವಂತೆ ವ್ಯವಸ್ಥೆ ಮಾಡಲು ನಿರ್ದೇಶಿಸಿರುವ ಹಿನ್ನೆಲೆಯಲ್ಲಿ ತಾಲ್ಲೂಕು ಮಟ್ಟದಲ್ಲಿ ಕಂಪ್ಯೂಟರ್ ಗಳು, ಲೇಸರ್ ಪ್ರಿಂಟರ್, ಫೋಟೋ ಪ್ರಿಂಟರ್, ಜೆರಾಕ್ಸ್ ಯಂತ್ರ, ಯು.ಪಿ.ಎಸ್ ಕ್ಯಾಮರಾ, ಎಲ್.ಸಿ.ಡಿ ಮತ್ತು ಸ್ಕ್ರೀನ್‌ಗಳನ್ನು, ತಾಲ್ಲೂಕಿಗೆ ಒಂದರಂತೆ ಲ್ಯಾಪ್ ಟ್ಯಾಪ್‌ಗಳು ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗೋದ್ರೇಜ್ ಆಲ್ಮೇರಾ, ಪಿ.ಡಿ.ಓ ಗೆ ಛೇರ್ |

| | | | |
|---|---|---|---|
| | | | ಮತ್ತು ಟೇಬಲ್ ಯು.ಪಿ.ಎಸ್ ಮತ್ತು ಪ್ಲಾಸ್ಟಿಕ್ ಛೇರ್‌ಗಳನ್ನು ಅಗತ್ಯಾನುಸಾರ ಖರೀದಿ ನಿಯಮಗಳನ್ನು ಪಾಲಿಸಿ ಕೊಂಡು ಖರೀದಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 4 | ಹಾಸನ ನಗರದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಕಟ್ಟಡ ನಿರ್ಮಾಣ ಕಾಮಗಾರಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ. | ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಇವರು ಹಾಸನ ನಗರದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಬಾಘದ ಕಛೇರಿ ಕಟ್ಟಡದ ಭಾಗಗಳನ್ನು ರಸ್ತೆ ಅಗಲೀಕರಣಕ್ಕಾಗಿ ನೆಲಸಮ ಮಾಡುವ ಯೋಜನೆಯು ನಗರಸಭೆಯಲ್ಲಿದ್ದು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಛೇರಿ ಕಟ್ಟಡವನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗದ ಕಛೇರಿ ಕಟ್ಟಡದಲ್ಲಿಯೇ ನಿರ್ಮಾಣ ಮಾಡಲು ರೂ.24.50 ಲಕ್ಷಗಳ ಅಂದಾಜಿಗೆ ದಿನಾಂಕ: 27-10-2010ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯಲ್ಲಿ ಅನುಮೋದನೆಯಾಗಿದ್ದು, ಅಂದಾಜು ಪಟ್ಟಿಗೆ ಆಡಳಿತಾತ್ಮಕ ಮಂಜೂರಾತಿ ನೀಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿಬನಿಯರಿಂಗ್ ವಿಭಾಗ, ಹಾಸನ ಇವರ ಕಛೇರಿ ಕಟ್ಟಡ ನಿರ್ಮಾಣದ ಸಂಬಂಧ ಸಿದ್ದಪಡಿಸಿರುವ ರೂ.24.50ಲಕ್ಷ (ರೂಪಾಯಿ ಇಪ್ಪತ್ತನಾಲ್ಕು ಲಕ್ಷದ ಐವತ್ತು ಸಾವಿರ ಮಾತ್ರ)ಗಳ ಅಂದಾಜಿಗೆ ಸಭೆಯು ಸರ್ವಾನುಮತದಿಂದ, ಆಡಳಿತಾತ್ಮಕ ಮಂಜೂರಾತಿ ನೀಡಿತು. |
| 5 | 2009-10ನೇ ಸಾಲಿನ ವಾರ್ಷಿಕ ಆಡಳಿತ ವರದಿಯ ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸುವ ಬಗ್ಗೆ. | 2009-10ನೇ ಸಾಲಿನಲ್ಲಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ವಿವಿಧ ಇಲಾಖೆಗಳಲ್ಲಿ ಅನುಷ್ಟಾನ ಮಾಡಿರುವ ವಿವಿಧ ಯೋಜನೆಗಳಡಿಯಲ್ಲಿ ಸಾಧಿಸಿರುವ ಪ್ರಗತಿಯ ಬಗ್ಗೆ ಜಿಲ್ಲಾ ಪಂಚಾಯಿತಿಯಿಂದ ವಾರ್ಷಿಕ ಆಡಳಿತ ವರದಿಯನ್ನು ಸಿದ್ದಪಡಿಸಿದ್ದು, ವರದಿಯ ಪ್ರತಿಗಳನ್ನು ಸರ್ಕಾರಕ್ಕೆ ಕಳುಹಿಸಬೇಕಾಗಿದ್ದು, ಸಭೆಯ ಅನುಮೋದನೆಗೆ ವಿಷಯವನ್ನು ಮಂಡಿಸಿದೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ವಿವಿಧ ಇಲಾಖೆಗಳಲ್ಲಿ 2009-10ನೇ ಸಾಲಿನಲ್ಲಿ ಅನುಷ್ಟಾನ ಮಾಡಿರುವ ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ, ಸಿದ್ದಪಡಿಸಿರುವ ವಾರ್ಷಿಕ ಆಡಳಿತ ವರದಿಯ ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸಲು ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು. |
| 6 | ಹಾಸನ ಜಿಲ್ಲಾ ಲೇಖಕಿಯರ ಬಳಗ ಇವರಿಗೆ ಧನಸಹಾಯ ನೀಡುವ ಬಗ್ಗೆ. | ಅಧ್ಯಕ್ಷರು, ಜಿಲ್ಲಾ ಲೇಖಕಿಯರ ಬಳಗ, ಹಾಸನ ಇವರು ಮನವಿಯನ್ನು ಸಲ್ಲಿಸಿ ಜಿಲ್ಲೆಯಲ್ಲಿ ಮೊಟ್ಟಮೊದಲ ಬಾರಿಗೆ ಆಹ್ವಾನಿತ ಮಹಿಳಾ ಕಲಾ ತಂಡಗಳಿಂದ ಜಿಲ್ಲಾ ಮಟ್ಟದ ಮಹಿಳಾ ದೇಸೀ ಉತ್ಸವವನ್ನು ನಗರದ ಕಲಾಭವನದಲ್ಲಿ ದಿನಾಂಕ: 28-11-2010ರ ಬಾನುವಾರದಂದು ಆಚರಿಸಿದ್ದು, ಈ ಕಾರ್ಯಕ್ರಮಕ್ಕೆ ಸುಮಾರು ರೂ.1.25ಲಕ್ಷಗಳು ಖರ್ಚಾಗಿದ್ದು, ಜಿಲ್ಲಾ ಪಂಚಾಯಿತಿ ವತಿಯಿಂದ ಧನ ಸಹಾಯ ನೀಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಅಧ್ಯಕ್ಷರು, ಜಿಲ್ಲಾ ಲೇಖಕಿಯರ ಬಳಗ, ಹಾಸನ ಇವರು ಕೋರಿರುವಂತೆ ಜಿಲ್ಲಾ ಮಟ್ಟದ ಮಹಿಳಾ ದೇಸೀ ಉತ್ಸವಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.10000/-(ರೂಪಾಯಿ ಹತ್ತು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 7 | ರಾಜ್ಯಮಟ್ಟದ ಹೊನಲು ಬೆಳಕಿನ ಕಬ್ಬಡಿ ಪಂದ್ಯಾವಳಿಗೆ ಸಹಾಯಧನ ಕೋರಿ | ಅಧ್ಯಕ್ಷರು, ರಾಷ್ಟ್ರಕವಿ ಕುವೆಂಪು ಜಾನಪದ ಯುವ ಕೋಲಾಟ ಸಂಘ(ರಿ), ಚಾಮಡಿಹಳ್ಳಿ, ಚನ್ನರಾಯಪಟ್ಟಣ ತಾಲ್ಲೂಕು ಇವರು ಮನವಿಯನ್ನು ಸಲ್ಲಿಸಿ ದಿನಾಂಕ: 11-12-2010ರ ಶನಿವಾರ ಚನ್ನರಾಯಪಟ್ಟಣ ತಾಲ್ಲೂಕು ಚಾಮಡಿಹಳ್ಳಿಯಲ್ಲಿ ಹೊನಲು ಬೆಳಕಿನ ಕಬ್ಬಡಿ ಪಂದ್ಯಾವಳಿಯನ್ನು ಆಯೋಜಿಸಿದ್ದು, ಜಿಲ್ಲಾ ಪಂಚಾಯಿತಿ ವತಿಯಿಂದ ಧನಸಹಾಯ ನೀಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಅಧ್ಯಕ್ಷರು, ರಾಷ್ಟ್ರಕವಿ ಕುವೆಂಪು ಜಾನಪದ ಯುವ ಕೋಲಾಟ ಸಂಘ(ರಿ), ಚಾಮಡಿಹಳ್ಳಿ, ಚನ್ನರಾಯಪಟ್ಟಣ ತಾಲ್ಲೂಕು ಇವರು ಕೋರಿರುವಂತೆ ಚನ್ನರಾಯಪಟ್ಟಣ ತಾಲ್ಲೂಕು, ಚಾಮಡಿಹಳ್ಳಿಯಲ್ಲಿ ಆಯೋಜಿಸಿರುವ ಹೊನಲು ಬೆಳಕಿನ ಕಬ್ಬಡಿ ಪಂದ್ಯಾವಳಿಗೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

| | | | |
|---|---|---|---|
| | ರಾಷ್ಟ್ರಮಟ್ಟದ ವಾಲೀಬಾಲ್ ಸ್ಪರ್ಧೆಯಲ್ಲಿ ಭಾಗವಹಿಸಿರುವ ಎನ್.ಎಸ್.ದರ್ಶಿನಿ ಮಾಳೇರ್, ಇವರಿಗೆ ಪ್ರೋತ್ಸಾಹಧನ ನೀಡುವ ಬಗ್ಗೆ. | ಎನ್.ಎಸ್.ದರ್ಶಿನಿ ಮಾಳೇರ್ ಬಿನ್ ಎನ್.ಡಿ.ಶಿವಲಿಂಗೇಗೌಡ, ನುಗ್ಗೇಹಳ್ಳಿ, ಚನ್ನರಾಯಪಟ್ಟಣ ಇವರು ಮನವಿಯನ್ನು ಸಲ್ಲಿಸಿ, 2007ನೇ ಇಸವಿ ಡಿಸೆಂಬರ್ ಮಾಹೆಯಲ್ಲಿ ಮಧ್ಯಪ್ರದೇಶ ರಾಜ್ಯದ ಗ್ವಾಲಿಯರ್‌ನ ದಾಬ್ರಾ ನಗರದಲ್ಲಿ ನಡೆದ 53ನೇ ನ್ಯಾಷನಲ್ ಸ್ಕೂಲ್ ಗೇಮ್ಸ್ (ವಾಲೀಬಾಲ್ ) ಬಾಯ್ಸ್ ಮತ್ತು ಗರ್ಲ್ಸ್ ವಿಭಾಗದ ಸ್ಪರ್ಧೆಯಲ್ಲಿ ಕರ್ನಾಟಕ ರಾಜ್ಯ ತಂಡದದಲ್ಲಿ ಭಾಗವಹಿಸಿರುತ್ತೇನೆ, 4 ಬಾರಿ ರಾಷ್ಟ್ರಮಟ್ಟ ವಾಲೀಬಾಲ್ ತಂಡಲ್ಲಿ ಭಾಗವಹಿಸಿ ಪ್ರತಿನಿಧಿಸಿ, ವಿಶ್ವ ವಿದ್ಯಾನಿಲಯ ಮಟ್ಟದಲ್ಲಿ ವಾಲೀಬಾಲ್ ಆಟಗಾರಳಾಗಿ ಪ್ರತಿನಿಧಿಸಿ ಉತ್ತಮ ಪ್ರಶಂಸೆಗೆ ಅರ್ಹಳಾಗಿದ್ದು, ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಮತ್ತು ಕ್ರೀಡಾ ಪರಿಕರಗಳನ್ನು ಕೊಂಡು ಕೊಳ್ಳಲು ಅನುಕೂಲವಾಗುವಂತೆ ಜಿಲ್ಲಾ ಪಂಚಾಯಿತಿ ವತಿಯಿಂದ ಪ್ರೋತ್ಸಾಹಧನವನ್ನು ನೀಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಎನ್.ಎಸ್.ದರ್ಶಿನಿ ಮಾಳೇರ್ ಬಿನ್ ಎನ್.ಡಿ.ಶಿವಲಿಂಗೇಗೌಡ, ನುಗ್ಗೇಹಳ್ಳಿ, ಚನ್ನರಾಯಪಟ್ಟಣ ಇವರು ಕೋರಿರುವಂತೆ, ವಾಲೀಬಾಲ್ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಪ್ರೋತ್ಸಾಹಧನವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 9 | ರಾಷ್ಟ್ರಮಟ್ಟದ ಸ್ಪರ್ಧೆಯ ಛತ್ತೀಸ್‌ಘಡ್ ರಾಜ್ಯದ ರಾಜನಂದಗಾವ್ ನಗರದಲ್ಲಿ ನಡೆಯಲಿರುವ ಕ್ರೀಡಾಕೂಟಕ್ಕೆ ಆಯ್ಕೆಯಾಗಿರುವ ಇಂಚರ, ಇವರಿಗೆ ಜಿಲ್ಲಾ ಪಂಚಾಯಿತಿ ವತಿಯಿಂದ ಪ್ರೋತ್ಸಾಹಧನ ನೀಡುವ ಬಗ್ಗೆ. | ಇಂಚರ, ಬಿನ್ ಎನ್.ಡಿ.ಶಂಕರ್, ನುಗ್ಗೇಹಳ್ಳಿ, ಚನ್ನರಾಯಪಟ್ಟಣ ತಾಲ್ಲೂಕು, ಇವರು ಮನವಿಯನ್ನು ಸಲ್ಲಿಸಿ ಛತ್ತೀಸ್‌ಘಡ್ ರಾಜ್ಯದ ರಾಜನಂದಗಾವ್ ನಗರದಲ್ಲಿ ನಡೆದ ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಕರ್ನಾಟಕ ರಾಜ್ಯ ತಂಡದ ಹಾಕಿ ಆಟದಲ್ಲಿ ಭಾಗವಹಿಸಿ ಪ್ರತಿನಿಧಿಸಿದ್ದೇನೆ ಮತ್ತು 54ನೇ ನ್ಯಾಷನಲ್ ಸ್ಕೂಲ್ ಗೇಮ್ಸ್, ಹರಿಯಾಣದಲ್ಲಿ ನಡೆದ ಹಾಕಿ ತಂಡದಲ್ಲಿ ಭಾಗವಹಿಸಿ ಪ್ರತಿನಿಧಿಸಿದ್ದು, ಕ್ರೀಡಾಕೂಟದಲ್ಲಿ ಭಾಗವಹಿಸಲು ಮತ್ತು ಕ್ರೀಡಾ ಪರಿಕರಗಳನ್ನು ಕೊಳ್ಳಲು ಜಿಲ್ಲಾ ಪಂಚಾಯಿತಿ ವತಿಯಿಂದ ಪ್ರೋತ್ಸಾಹ ಧನ ನೀಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಇಂಚರ, ಬಿನ್ ಎನ್.ಡಿ.ಶಂಕರ್, ನುಗ್ಗೇಹಳ್ಳಿ, ಚನ್ನರಾಯಪಟ್ಟಣ ತಾಲ್ಲೂಕು, ಇವರು ಕೋರಿರುವಂತೆ, ಕ್ರೀಡಾ ಕೂಟದಲ್ಲಿ ಭಾಗವಹಿಸಲು ಮತ್ತು ಕ್ರೀಡಾ ಪರಿಕರಗಳನ್ನು ಕೊಳ್ಳಲು ಅನುಕೂಲವಾಗುವಂತೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಪ್ರೋತ್ಸಾಹಧನವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 10 | ರಾಷ್ಟ್ರಮಟ್ಟದ ವಾಲೀಬಾಲ್ ಸ್ಪರ್ಧೆಯಲ್ಲಿ ಭಾಗವಹಿಸಿರುವ ಎಂ.ಆರ್.ಪ್ರತಾಪ್ ಇವರಿಗೆ ಪ್ರೋತ್ಸಾಹಧನ ನೀಡುವ ಬಗ್ಗೆ. | ಎಂ.ಆರ್.ಪ್ರತಾಪ್ ಬಿನ್ ರಂಗೇಗೌಡ, ಮುದ್ದನಹಳ್ಳಿ, ಚನ್ನರಾಯಪಟ್ಟಣ ಇವರು ಮನವಿಯನ್ನು ಸಲ್ಲಿಸಿ, 2007ನೇ ಇಸವಿ ಡಿಸೆಂಬರ್ ಮಾಹೆಯಲ್ಲಿ ಮಧ್ಯಪ್ರದೇಶ ರಾಜ್ಯದ ಗ್ವಾಲಿಯರ್‌ನ ದಾಬ್ರಾ ನಗರದಲ್ಲಿ ನಡೆದ 53ನೇ ನ್ಯಾಷನಲ್ ಸ್ಕೂಲ್ ಗೇಮ್ಸ್ (ವಾಲೀಬಾಲ್ ) ಬಾಯ್ಸ್ ಮತ್ತು ಗರ್ಲ್ಸ್ ವಿಭಾಗದ ಸ್ಪರ್ಧೆಯಲ್ಲಿ ಕರ್ನಾಟಕ ರಾಜ್ಯ ತಂಡದದಲ್ಲಿ ಭಾಗವಹಿಸಿರುತ್ತೇನೆ, ವಿಶ್ವ ವಿದ್ಯಾನಿಲಯ ಮಟ್ಟದಲ್ಲಿ ವಾಲೀಬಾಲ್ ಆಟಗಾರನಾಗಿ ಪ್ರತಿನಿಧಿಸಿ ಉತ್ತಮ ಪ್ರಶಂಸೆಗೆ ಅರ್ಹನಾಗಿದ್ದು, ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಮತ್ತು ಕ್ರೀಡಾ ಪರಿಕರಗಳನ್ನು ಕೊಂಡು ಕೊಳ್ಳಲು ಅನುಕೂಲವಾಗುವಂತೆ ಜಿಲ್ಲಾ ಪಂಚಾಯಿತಿ ವತಿಯಿಂದ ಪ್ರೋತ್ಸಾಹಧನವನ್ನು ನೀಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಎಂ.ಆರ್.ಪ್ರತಾಪ್, ಬಿನ್ ರಂಗೇಗೌಡ, ಮುದ್ದನಹಳ್ಳಿ, ಚನ್ನರಾಯಪಟ್ಟಣ ಇವರು ಕೋರಿರುವಂತೆ, ವಾಲೀಬಾಲ್ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಪ್ರೋತ್ಸಾಹಧನವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

Mahadevamma
(ಮಹದೇವಮ್ಮ)
ಅಧ್ಯಕ್ಷರು,
ಜಿಲ್ಲಾ ಪಂಚಾಯತ್, ಹಾಸನ.